ತುಮಕೂರು ಸ್ಮಾರ್ಟ್ ಸಿಟಿ ಲಿಮಿಟೆಡ್, ತುಮಕೂರು.
ಶ್ರೀ ಮಹಾಲಕ್ಷ್ಮೀ ಆರ್ಕೇಡ್, ಎಸ್.ಎಸ್.ಪುರಂ ಮುಖ್ಯ ರಸ್ತೆ, ಕಾಫಿ ಬೋರ್ಡ್ ಕಾಲೋನಿ, ತುಮಕೂರು-572102
ವೆಬ್‌ಸೈಟ್ : www.smartcitytumakuru.in ದೂರವಾಣಿ : 0816-2278190
ಇಮೇಲ್ : office@smartcitytumakuru.in CIN : U74999KA2017PLC099774

ಸಂಖ್ಯೆ: ತುಸ್ಮಾಸಿ/ಆ.ಶಾ/ಸಿಆರ್/ /2018-19 ದಿನಾಂಕ: 02-02-2019

# ಪತ್ರಿಕಾ ಪ್ರಕಟಣೆ

**ತುಮಕೂರು ನಗರದ ಶಾಸಕರಿಂದ ಸ್ಮಾರ್ಟ್ ಸಿಟಿ ಯೋಜನೆ ಪ್ರಗತಿ ಪರಿಶೀಲನೆ: ಪಾಲಿಕೆ ವತಿಯಿಂದ ಎಲ್ಲಾ ರೀತಿಯ ಸಹಕಾರಕ್ಕೆ ಮಹಾಪೌರರು ಮತ್ತು ಉಪ ಮಹಾಪೌರರು ಭರವಸೆ.**

**ತುಮಕೂರು:**

ತುಮಕೂರು ಮಹಾನಗರ ಪಾಲಿಕೆಗೆ ನೂತನವಾಗಿ ಆಯ್ಕೆಗೊಂಡ ಶ್ರೀಮತಿ. ಲಲಿತಾ ರವೀಶ್, ಮಹಾಪೌರರು ಮತ್ತು ಶ್ರೀಮತಿ ಬಿ.ಎಸ್.ರೂಪಶ್ರೀ, ಉಪ ಮಹಾಪೌರರು ಇಂದು ತುಮಕೂರು ಸ್ಮಾರ್ಟ್ ಸಿಟಿ ಲಿಮಿಟೆಡ್ ಕಛೇರಿಗೆ ಭೇಟಿ ನೀಡಿದ್ದರು. ಈ ಸಂದರ್ಭದಲ್ಲಿ ತುಮಕೂರು ಸ್ಮಾರ್ಟ್ ಸಿಟಿ ಲಿಮಿಟೆಡ್ ಕಛೇರಿಯ ವ್ಯವಸ್ಥಾಪಕ ನಿರ್ದೇಶಕರು ಹಾಗೂ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳಾದ ಶ್ರೀ.ಬಿ.ಟಿ.ರಂಗಸ್ವಾಮಿ ಇವರು ಆತ್ಮೀಯವಾಗಿ ಬರಮಾಡಿಕೊಂಡರು.

ತುಮಕೂರು ನಗರ ಶಾಸಕರಾದ ಶ್ರೀ.ಜ್ಯೋತಿ ಗಣೇಶ್ ಇವರ ಅಧ್ಯಕ್ಷತೆಯಲ್ಲಿ ತುಮಕೂರು ಸ್ಮಾರ್ಟ್ ಸಿಟಿ ಲಿಮಿಟೆಡ್ ವತಿಯಿಂದ ಹಮ್ಮಿಕೊಂಡಿರುವ ಯೋಜನೆಗಳ ಪ್ರಗತಿ ಪರಿಶೀಲನಾ ಸಭೆಯನ್ನು ನಡೆಸಲಾಯಿತು. ಈ ಸಭೆಯಲ್ಲಿ ಶ್ರೀಮತಿ. ಲಲಿತಾ ರವೀಶ್, ಮಹಾಪೌರರು, ಶ್ರೀಮತಿ ಬಿ.ಎಸ್.ರೂಪಶ್ರೀ, ಉಪ ಮಹಾಪೌರರು ಹಾಗೂ ಇತರೆ ಪಾಲಿಕೆ ಸದಸ್ಯರು ಉಪಸ್ಥಿತರಿದ್ದರು.

ಸ್ಮಾರ್ಟ್ ಸಿಟಿ ಅನುದಾನ ಸಂಪೂರ್ಣವಾಗಿ ಬಳಸಿಕೊಂಡು ನಾಗರಿಕರಿಗೆ ಹೆಚ್ಚಿನ ಸೌಲಭ್ಯ ನೀಡುವ ನಿಟ್ಟಿನಲ್ಲಿ ಒಗಟ್ಟಿನಿಂದ ಶ್ರಮಿಸಲು ಶಾಸಕರಾದ ಶ್ರೀ.ಜ್ಯೋತಿ ಗಣೇಶ್ ಸಭೆಯಲ್ಲಿ ಪಾಲಿಕೆ ಸದಸ್ಯರಿಗೆ ಮನವಿ ಮಾಡಿದರು.

ಕೇಂದ್ರ ಸರ್ಕಾರ ಹಾಗೂ ರಾಜ್ಯ ಸರ್ಕಾರದಿಂದ ಸಾಕಷ್ಟು ಅನುದಾನ ಬಿಡುಗಡೆಯಾಗುತ್ತಿದೆ. ಈ ಹಿನ್ನೆಲೆಯಲ್ಲಿ ನಗರದ ಎಲ್ಲಾ 35 ವಾರ್ಡ್‌ಗಳ ಅಭಿವೃದ್ಧಿಗೆ ಪ್ರತಿ ಒಬ್ಬ ಪಾಲಿಕೆಯ ಸದಸ್ಯರು ಮುಂದೆ ನಿಂತು ಒತ್ತುವರಿ ನಡೆಯದಂತೆ ಹಾಗೂ ಯೋಜನೆಯನ್ನು ಅನುಷ್ಠಾನ ಮಾಡಿ, ಅನುದಾನವನ್ನು ಸಮಗ್ರ ಬಳಕೆ ಮಾಡಿಕೊಳ್ಳಬೇಕೆಂದು ಕರೆ ನೀಡಿದರು.

ಮೊದಲಿಗೆ ಸಂಸ್ಥೆಯ ಪ್ರಧಾನ ವ್ಯವಸ್ಥಾಪಕರಾದ (ಆಡಳಿತ) ಶ್ರೀ ಪಿ.ಎನ್.ಸ್ವಾಮಿ ಇವರು ಆಡಳಿತಾತ್ಮಕ ಅನುಮೋದನೆ ದೊರೆತಿರುವ ಹಲವು ಯೋಜನೆಗಳ ಬಗ್ಗೆ ಪಿಪಿಟಿ ಮೂಲಕ ಸಮಗ್ರ ಮಾಹಿತಿ ನೀಡಿದರು.

ಸಭೆಯಲ್ಲಿ ಸ್ಮಾರ್ಟ್ ಸಿಟಿ ಯೋಜನೆಗಳ ಬಗ್ಗೆ, ಕೈಗೊಂಡಿರುವ ಕಾಮಗಾರಿ ಬಗ್ಗೆ ವಿವರಿಸಲಾಯಿತು. ರಸ್ತೆ ಅಭಿವೃದ್ಧಿ, ಸಿಸಿ ಟಿವಿ, ಟ್ರಾಫಿಕ್ ನಿಯಂತ್ರಣ, ಸರ್ಕಾರಿ ಪದವಿ ಪೂರ್ವ ಕಾಲೇಜಿನ ಪುನರುಜೀವನ ಕಾರ್ಯ, ಡಿಜಿಟಲ್ ಗ್ರಂಥಾಲಯ ನಿರ್ಮಾಣ, ಉದ್ಯಾನವನಗಳ ಅಭಿವೃದ್ಧಿ, ಸ್ಮಾರ್ಟ್ ಲಾಂಜ್, ಎಲ್.ಇ.ಡಿ ಸ್ಮಾರ್ಟ್ ಲೈಟ್, ಶಿಕ್ಷಣ, ಆರೋಗ್ಯ ಹೀಗೆ ಹಲವು ಅಂಶಗಳ ಬಗ್ಗೆ ಮಾಹಿತಿ ನೀಡಲಾಯಿತು.

ಈ ಸಂದರ್ಭದಲ್ಲಿ ತುಮಕೂರು ಸ್ಮಾರ್ಟ್ ಸಿಟಿ ಲಿಮಿಟೆಡ್ ಕಛೇರಿಯ ವ್ಯವಸ್ಥಾಪಕ ನಿರ್ದೇಶಕರು ಹಾಗೂ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳಾದ ಶ್ರೀ.ಬಿ.ಟಿ.ರಂಗಸ್ವಾಮಿ ಇವರು ಮಾತನಾಡಿ, ಸ್ಮಾರ್ಟ್ ಸಿಟಿ ಯೋಜನೆಯಡಿ ಕೈಗೊಂಡಿರುವ ಕಾಮಗಾರಿಗಳು ಪ್ರಗತಿಯಲ್ಲಿದ್ದು, ಪಾಲಿಕೆ ಸಹಕಾರ ಕೋರಿದರು. ನಗರದಲ್ಲಿ ಕೆರೆಗಳನ್ನು ಸ್ಮಾರ್ಟ್ ಸಿಟಿ ವತಿಯಿಂದ ಅಭಿವೃದ್ಧಿ ಪಡಿಸಲಾಗುವುದು ಇದರಿಂದ ಅಂತರ್ಜಲ ಮಟ್ಟ ಹೆಚ್ಚಲಿದೆ ಹಾಗೂ ಕೆರೆಗಳನ್ನು ಸಂರಕ್ಷಿಸಿದಂತಾಗುತ್ತದೆ ಎಂದು ಈ ಸಂದರ್ಭದಲ್ಲಿ ತಿಳಿಸಿದರು. ಈ ಸಂದರ್ಭದಲ್ಲಿ ಪಾಲಿಕೆ ಮಹಾಪೌರರು ಮತ್ತು ಉಪ ಮಹಾಪೌರರು ಇವರಿಗೆ ಯೋಜನೆಯ ಸಮಗ್ರ ಮಾಹಿತಿ ನೀಡಿ ಯೋಜನೆಯ ಪರಿಚಯ ಮಾಡಿ ವಿವಿಧ ವಾರ್ಡ್‌ಗಳಲ್ಲಿ ಕೈಗೊಂಡಿರುವ ಕಾಮಗಾರಿಗಳ ಬಗ್ಗೆ ಮಾಹಿತಿ ನೀಡಲಾಯಿತು ಹಾಗೂ ಈ ಯೋಜನೆಗಳ ವೆಚ್ಚ ಮತ್ತಿತರ ಮಾಹಿತಿಯನ್ನು ನೀಡಲಾಯಿತು.

ತುಮಕೂರು ನಗರವನ್ನು ಸುಂದರ ನಗರ ಮಾಡಲು ಸ್ಮಾರ್ಟ್ ಸಿಟಿ ಹಮ್ಮಿಕೊಂಡಿರುವ ಎಲ್ಲಾ ಅಭಿವೃದ್ಧಿ ಕಾರ್ಯಗಳಿಗೆ ಪಾಲಿಕೆ ವತಿಯಿಂದ ಎಲ್ಲಾ ರೀತಿಯ ಸಹಕಾರ ನೀಡುವುದಾಗಿ ಮಹಾಪೌರರು ಮತ್ತು ಉಪ ಮಹಾಪೌರರು ಭರವಸೆ ನೀಡಿದರು.

ಸಭೆಯಲ್ಲಿ ಸಂಸ್ಥೆಯ ಜಂಟಿ ವ್ಯವಸ್ಥಾಪಕ ನಿರ್ದೇಶಕರಾದ ಶ್ರೀ.ಅಜಯ್ ವಿ, ಮುಖ್ಯ ಅಭಿಯಂತರರಾದ ಡಾ॥ ಎಚ್ ಆರ್ ಶಾಂತರಾಜಣ್ಣ, ಕಾರ್ಯಪಾಲಕ ಅಭಿಯಂತರರಾದ ಶ್ರೀ ರಮೇಶ್ ಎಂ ಮತ್ತು ಇತರೆ ಅಧಿಕಾರಿಗಳು ಉಪಸ್ಥಿತರಿದ್ದರು.

TUMAKURU SMART CITY LTD. TUMAKURU